ಬೆಂಗಳೂರು ನಗರದಲ್ಲಿರುವ ಸರ್ಕಾರಿ ಆಸ್ಪತ್ರೆಗಳ ದುಸ್ಥಿತಿ.

2345(2992)

ಶ್ರೀ ದಿನೇಶ್ ಗುಂಡೂರಾವ್(ಗಾಂಧೀನಗರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಬೆಂಗಳೂರು ನಗರದಲ್ಲಿರುವ ವಿಕ್ಟೋರಿಯಾ ಆಸ್ಪತ್ರೆ, ಬೌರಿಂಗ್ ಮತ್ತು ಲೇಡಿಕರ್ಜನ್ ಆಸ್ಪತ್ರೆಗಳ ಆವರಣದಲ್ಲಿನ ಗಿಡಗಂಟಿಗಳನ್ನು ತೆಗೆದುಹಾಕದೆ ಆಸ್ಪತ್ರೆಯ ವಾತಾವರಣ ಕೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2. ಹಾಗಿದ್ದಲ್ಲಿ ಈ ಆಸ್ಪತ್ರೆಯ ಆವರಣಗಳನ್ನು ಸ್ವಚ್ಛವಾಗಿಡಲು ಸರ್ಕಾರದವರು ಕೈಗೊಳ್ಳಲಿರುವ ಕಾರ್ಯಕ್ರಮಗಳೇನು?

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

1. ಇಲ್ಲ.

2. ಆಸ್ಪತ್ರೆಗಳ ಆವರಣವನ್ನು ಮತ್ತು ವಾರ್ಡ್‌ಗಳನ್ನು ಸ್ವಚ್ಛವಾಗಿಡಲು ಗ್ರೂಪ್-ಡಿ ನೌಕರರ ಸೇವೆಯನ್ನು ಪಡೆಯಲಾಗುತ್ತಿದೆ. ಜೊತೆಗೆ ಗುತ್ತಿಗೆ ಆಧಾರದ ಮೇಲೆ ನೇಮಿಸಲಾದ ಖಾಸಗೀ ನೈರ್ಮಲ್ಯ ಸೇವಕರ ಮೂಲಕ ಈ ಎಲ್ಲಾ ಆಸ್ಪತ್ರೆಗಳ ಸ್ವಚ್ಛತಾ ಕೆಲಸವನ್ನು ಮಾಡಿಸಲಾಗುತ್ತಿದೆ.

Shortage of Teachers in Malanad area.

2346(2952)

Sri Gopala Pujari.K.(Byndoor): will the Hon'ble minister for Primary and Secondary education be pleased to state.

a) Whether it has come to the notice of the Government that there is shortage of teachers in Malnad area in the State?

b) Furnish the places where there is shortage of